M45/1629/17

**ಕರ್ನಾಟಕ ಲೋಕಾಯುಕ್ತ**

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಎಂವೈಎಸ್\1629\2017\ಉನಿವಿ-4

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:21/07/2018

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ವರದಿ**

**ವಿಷಯ:** ಸರ್ಕಾರಿ ನೌಕರರಾದ ಮೈಸೂರು ನಗರ ಪಾಲಿಕೆಯ ನಗರ ಯೋಜನೆಯ ಜಂಟಿ ನಿರ್ದೇಶಕರಾಗಿದ್ದ ಶ್ರೀ.ಚೌಡೇಗೌಡ (ಪ್ರಸ್ತುತ ನಿವೃತ್ತ) ರವರ ಕರ್ತವ್ಯ ಲೋಪದ ಬಗ್ಗೆ.

**********

ಮೈಸೂರು ಜಿಲ್ಲೆ ರಾಮಕೃಷ್ಣ ನಗರ 9ನೇ ಕ್ರಾಸ್ ಈ & ಎಫ್ ಬ್ಲಾಕ್ #592ರ ನಿವಾಸಿಯಾದ ಶ್ರೀಮತಿ.ಪಿ.ಲಕ್ಷ್ಮಿ ರಾಮಚಂದ್ರು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ರವರು ತಮ್ಮ ದೂರಿನಲ್ಲಿ ಮೈಸೂರು ನಗರ ಪಾಲಿಕೆಯ ನಗರ ಯೋಜನೆಯ ಜಂಟಿ ನಿರ್ದೇಶಕರಾಗಿದ್ದ ಶ್ರೀ.ಚೌಡೇಗೌಡ [ಪ್ರಸ್ತುತ ನಿವೃತ್ತ] (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** 2008ನೇ ಇಸವಿಯಲ್ಲಿ ನಿರ್ಮಾಣ ಮಾಡಿದ ಮನೆಗೆ ಮುಕ್ತಾಯ ಪ್ರಮಾಣ ಪತ್ರವನ್ನು ನೀಡುವ ಬಗ್ಗೆ ತಾವು ಮೈಸೂರು ಮಹಾನಗರ ಪಾಲಿಕೆಗೆ ದಿ:27.7.2013ರಂದು ದಂಡದ ಮೊತ್ತವನ್ನು ಸಂದಾಯ ಮಾಡಿದ್ದರೂ ಎದುರುದಾರರು ಮುಕ್ತಾಯ ಪ್ರಮಾಣ ಪತ್ರವನ್ನು ನೀಡಿಲ್ಲವೆಂದು ಹೇಳಿದ್ದಾರೆ.

3. ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿಲ್ಲ. ಮೈಸೂರು ಮಹಾನಗರ ಪಾಲಿಕೆಯ ನಗರ ಯೋಜನಾಧಿಕಾರಿ ರವರು ಎದುರುದಾರರ ಸೇವಾ ವಿವರ ಮತ್ತು ವರದಿಯನ್ನು ಸಲ್ಲಿಸಿದ್ದಾರೆ. ಸದರಿ ವರದಿಯಲ್ಲಿ –

ಸ್ವತ್ತಿನ ಸಂ:592ರಲ್ಲಿ ವಸತಿ ಕಟ್ಟಡ ನಿರ್ಮಿಸಲು ದೂರುದಾರರಿಗೆ ದಿ:30.12.2006ರಂದು ಪಾಲಿಕೆಯಿಂದ ಕಟ್ಟಡ ರಹದಾರಿ ಮಂಜೂರು ಮಾಡಲಾಗಿದ್ದು, ಕಟ್ಟಡ ನಿರ್ಮಾಣ ಪೂರ್ಣಗೊಂಡ ನಂತರ ದೂರುದಾರರು ದಿ:5.8.2011ರಂದು ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರ ನೀಡಲು ಅರ್ಜಿ ಸಲ್ಲಿಸಿದ್ದಾರೆ. ಸದರಿ ಪ್ರಮಾಣ ಪತ್ರ ನೀಡಲು ವಲಯ ನಿಯಮಾನುಸಾರ ಪಾಲಿಕೆಗೆ ಸಿ.ಆರ್. ಶುಲ್ಕ ಪಾವತಿಸಲು ಸದರಿಯವರಿಗೆ ದಿನಾಂಕ:7.8.2012 ಮತ್ತು 4.7.2013ರಂದು ಹಿಂಬರಹವನ್ನು ನೀಡಿದ್ದು, ದಿ:25.7.2013ರಂದು ಅವರು ₹12,800/- ಗಳನ್ನು ಸಂದಾಯ ಮಾಡಿದ್ದಾರೆ. ದಿ:31.7.2013ರಂದು ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರವನ್ನು ಸಿದ್ಧ ಪಡಿಸಲಾಗಿದ್ದು. ಆದರೆ, ಅಂದಿನ ಜಂಟಿ ನಿರ್ದೇಶಕರು ಮೇಲ್ಕಂಡ ಯಾವುದೇ ಕ್ರಮದಲ್ಲಿ ಭಾಗಿಯಾಗಿಲ್ಲದ ಕಾರಣ ಖುದ್ದಾಗಿ ಒಮ್ಮೆ ಸ್ಥಳ ಪರಿಶೀಲಿಸಿದ ನಂತರ ಪ್ರಮಾಣ ಪತ್ರಕ್ಕೆ ಸಹಿ ಮಾಡಲು ಒಪ್ಪಿದ್ದು, ಸಮಯದ ಅಭಾವದಿಂದ ಸ್ಥಳ ಪರಿಶೀಲಿಸಲು ಸಾಧ್ಯವಾಗಿಲ್ಲ. ಹಾಗಾಗಿ ಜಂಟಿ ನಿರ್ದೇಶಕರ ಸಹಿ ಆಗದೇ ಪ್ರಮಾಣ ಪತ್ರವನ್ನು ಹಾಗೇ ವಿಲೇ ಇಟ್ಟಿರುವುದು ಕಂಡು ಬಂದಿದೆ. ಸರ್ಕಾರದ ಸುತ್ತೋಲೆ ಸಂ:ಯುಡಿಡಿ/8/ಟಿಟಿಪಿ/2016 ದಿ:16.4.2016ರಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮಂಜೂರು ಮಾಡುವ ಕಟ್ಟಡ ರಹದಾರಿ ಹಾಗೂ ಕಟ್ಟಡ ಪೂರ್ಣಗೊಂಡ ಪ್ರಮಾಣಪತ್ರ ನೀಡಲು ಕೆಲವು ನಿರ್ದೇಶನ ನೀಡಲಾಗಿದೆ. ಸದರಿ ಸುತ್ತೋಲೆಯನ್ವಯ ಕಟ್ಟಡದ ನಡು ಜಾಗವನ್ನು ಪ್ರತ್ಯೇಕವಾಗಿ ಲೆಕ್ಕ ಮಾಡಿ ಸದರಿ ನಡುಜಾಗ ಉಲ್ಲಂಘನೆಯು ಶೇಕಡ 5ಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರ ನೀಡಲು ಅವಕಾಶವಿದ್ದು ದೂರುದಾರರ ಬಾಬ್ತು ಕಟ್ಟಡದ ನಡು ಜಾಗ ಉಲ್ಲಂಘನೆಯು ಶೇಕಡ 5ಕ್ಕಿಂತ ಹೆಚ್ಚು ಇರುವುದರಿಂದ ದೂರುದಾರರಿಗೆ ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರ ನೀಡಲು ಅವಕಾಶವಿಲ್ಲವೆಂದು ಹೇಳಿದ್ದಾರೆ.

4. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ದೂರುದಾರರ ಬಾಬ್ತು ಸ್ವತ್ತಿನ ಸಂ:592, 9ನೇ ಕ್ರಾಸ್, ರಾಮಕೃಷ್ಣ ನಗರ ಮೈಸೂರು ಇಲ್ಲಿ ವಸತಿ ಕಟ್ಟಡ (ತಳಮಹಡಿ + ನೆಲ + 2 ಮಹಡಿಗಳು) ನಿರ್ಮಿಸಲು ಅವರು ದಿ:30.12.2006ರಂದು ಮೈಸೂರು ಮಹಾನಗರ ಪಾಲಿಕೆಯಿಂದ ಪರವಾನಿಗೆ ಪಡೆದು, ಕಟ್ಟಡ ನಿರ್ಮಾಣ ಪೂರ್ಣಗೊಂಡ ನಂತರ ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರ ನೀಡಲು ಮಹಾನಗರ ಪಾಲಿಕೆಗೆ ದಿ.5.8.2011ರಂದು ಅರ್ಜಿಯನ್ನು ಸಲ್ಲಿಸಿರುವುದು ಕಂಡು ಬಂದಿದೆ. ಸದರಿ ಅರ್ಜಿಯ ಬಾಬ್ತು ದೂರುದಾರರು ದಿ:25.7.2013ರಂದು ₹12,800/- ಶುಲ್ಕವನ್ನು ಮಹಾನಗರ ಪಾಲಿಕೆಗೆ ಪಾವತಿ ಮಾಡಿದ್ದಾರೆ. ಆದರೂ ಎದುರುದಾರರು ಸುಮಾರು ಮೂರು ವರ್ಷಗಳ ಅವಧಿಯಲ್ಲಿ ಸ್ಥಳ ಪರಿಶೀಲನೆ ನಡೆಸದೇ ಇರುವುದು ಕಂಡು ಬಂದಿದೆ. ಸದರಿಯವರು ದಿ:31.5.2016ರಂದು ಸೇವೆಯಿಂದ ನಿವೃತ್ತಿಗೊಂಡಿದ್ದು, ಸ್ಥಳ ಪರಿಶೀಲನೆ ನಡೆಸದೇ ಇರಲು ಯಾವುದೇ ಸಕಾರಣ ಕಂಡು ಬಂದಿಲ್ಲ. ಕಟ್ಟಡ ನಿರ್ಮಾಣ ಪೂರ್ಣಗೊಂಡ ನಂತರ ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರ ನೀಡಲು ದೂರುದಾರರು ಅರ್ಜಿ ನೀಡಿ, ನಿಗದಿತ ಶುಲ್ಕ ಸಂದಾಯ ಮಾಡಿದ್ದಾಗ್ಯೂ,

N. Anand

m45/1629/17



ಪ್ರಮಾಣ ಪತ್ರ ನೀಡುವ ಬಗ್ಗೆ ಎದುರುದಾರರು ಯಾವುದೇ ಕ್ರಮ ಕೈಗೊಳ್ಳದೇ ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ.

5. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

6. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

7. ಅದಲ್ಲದೆ, ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ ಎದುರುದಾರರು ದಿನಾಂಕ:31/05/2015ರಂದು ಈಗಾಗಲೇ ನಿವೃತ್ತಿ ಹೊಂದಿರುವುದರಿಂದ, **ಕೆಸಿಎಸ್‌ಆರ್ ನಿಯಮ 214(2)(ಬಿ)(i)ರ ಅಡಿ ಇಲಾಖಾ ವಿಚಾರಣೆಗೆ ಅನುಮತಿಯನ್ನು** ನೀಡಿ ಮತ್ತು ಎದುರುದಾರರ ವಿರುದ್ಧದ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14(ಎ) ಅಡಿ ಈ ಸಂಸ್ಥೆಗೆ ವಹಿಸ ಬೇಕೆಂದು ಕೋರಿದೆ.

8. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ

N. Anand

ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ, ಏಕೆಂದರೆ ಎದುರುದಾರರು ದಿ:31/05/2016ರಂದು ನಿವೃತ್ತಿ ಹೊಂದಿರುತ್ತಾರೆ.

N. Anand 24/7

(ನ್ಯಾಯಮೂರ್ತಿ ಎನ್.ಆನಂದ)
ಉಪಲೋಕಾಯುಕ್ತ,
ಕರ್ನಾಟಕ ರಾಜ್ಯ.

23/7